ಕರ್ನಾಟಕ ಸರ್ಕಾರ
**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**
E-Mail: prydirector.edu.sgkar@nic.in

ಸಂಖ್ಯೆ: ಸಿ7(8) ಆರ್.ಟಿ.ಇ/ನಿಯಮ/2016-17 ದಿನಾಂಕ:28/02/2017.

**: : ಸುತ್ತೋಲೆ : :**

ವಿಷಯ: ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012ರ ನಿಯಮ 8 (4) ರಲ್ಲಿ ನಿಗಧಿಪಡಿಸಿರುವ ನಮೂನೆ III ನ್ನು ವಾಪಸ್ ಪಡೆದಿರುವ ಬಗ್ಗೆ.

***

ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012ರ ನಿಯಮ 8 (4) ರಲ್ಲಿ ಈ ಕೆಳಕಂಡಂತೆ ಹೇಳಲಾಗಿದೆ.

" The reimbursement shall be made directly, by way of Electronic Fund Transfer in the separate bank account maintained by the school in two instalments during the academic year. First instalment of 50/% shall be reimbursed in the month of September and second instalment shall be reimbursed in the month of January after receiving compliance report in FORM III from the school."

ಹಿಂದಿನ ಸಾಲುಗಳಲ್ಲಿ 2ನೇ ಕಂತಿನ ಶುಲ್ಕಮರುಪಾವತಿ ಮಾಡುವಾಗ ಆ ಶಾಲೆಯಲ್ಲಿ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾದ ಮಕ್ಕಳ ಶೈಕ್ಷಣಿಕ ಪ್ರಗತಿ ಪರಿಶೀಲನೆ ಬಗ್ಗೆ ಖಚಿತಪಡಿಸಿಕೊಳ್ಳುವ ಸಲುವಾಗಿ ನಮೂನೆ 3ರಲ್ಲಿ ಅನುಸರಣಾ ವರದಿಯನ್ನು ಪಡೆಯಲಾಗುತ್ತಿತ್ತು.

ಆದರೆ, 2016-17ನೇಸಾಲಿನಿಂದ ಶುಲ್ಕಮರುಪಾವತಿಯನ್ನು ಆನ್‌ಲೈನ್ ಮೂಲಕ ಎಲ್ಲಾ ಶಾಲೆಗಳಿಗೆ ಖಜಾನೆ-2 ತಂತ್ರಾಂಶದ ಮೂಲಕ ಉಪನಿರ್ದೇಶಕರು(ಆಡಳಿತ) ಇವರಿಂದ ನೇರವಾಗಿ ಶಾಲೆಗಳಿಗೆ ಪಾವತಿ ಮಾಡಲಾಗುತ್ತಿದೆ. ಹೀಗೆ ಮಾಡುವಾಗ ಮಕ್ಕಳ ಶೈಕ್ಷಣಿಕ ಪ್ರಗತಿಯನ್ನು ಸಹಾ ಆನ್‌ಲೈನ್ (SATS) ಮುಖಾಂತರವೇ ಖಚಿತಪಡಿಸಿಕೊಳ್ಳಲಾಗುತ್ತಿದೆ. ಆದುದರಿಂದ ನಿಯಮ 8(4)ರಡಿ ನಿಗಧಿಪಡಿಸಿರುವ ನಮೂನೆ III ನ್ನು ಮುಂದುವರೆಸುವ ಅಗತ್ಯತೆ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಎರಡನೇ ಕಂತಿನ ಶುಲ್ಕಮರುಪಾವತಿ ಸಂಬಂಧ ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಗಳು-2012ರಲ್ಲಿ ಪುಟಸಂಖ್ಯೆ 19-20 ರಲ್ಲಿ ನಿಗಧಿಪಡಿಸಲಾದ ನಮೂನೆ- III ನ್ನು ನಿಯಮಗಳಿಗೆ ತಿದ್ದುಪಡಿ ತರುವುದನ್ನು ಕಾಯ್ದಿರಿಸಿ ವಾಪಸ್ ಪಡೆಯಲಾಗಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ.
28/2/17

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಆಯುಕ್ತರ ಆಪ್ತ ಕಾರ್ಯದರ್ಶಿಗಳು, ಇವರಿಗೆ ಸಲ್ಲಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತಲು ಕೋರಲಾಗಿದೆ.
2. ಹಿರಿಯ ಸಹಾಯಕ ನಿರ್ದೇಶಕರು, ಇ–ಗವರ್ನೆನ್ಸ್ ವಿಭಾಗ, ಆಯುಕ್ತರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ ಸಲ್ಲಿಸಿದೆ.
3. ಕಛೇರಿ ಪ್ರತಿ.